PW-14
CW-7

**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ನ್ಯಾಯಾಲಯ, ದಾವಣಗೆರೆ.**

**SC No.177/2019**

| | | |
|---|---|---|
| ಸಾಕ್ಷಿದಾರರ ಹೆಸರು | : | ಕರಿಬಸಪ್ಪ |
| ತಂದೆಯ/ಗಂಡನ ಹೆಸರು | : | ಬಸವರಾಜಪ್ಪ |
| ವಯಸ್ಸು | : | 38 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸ ಸ್ಥಳ | : | ಕಾಡಜ್ಜಿ ಗ್ರಾಮ, ದಾವಣಗೆರೆ ತಾಲ್ಲೂಕು |

ಪಿ.ಡಬ್ಲ್ಯೂ 14

ಸಿ.ಡಬ್ಲ್ಯೂ 7

ದಿ: 01-08-2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರಿಂದ**

1. ಈ ತೋರಿಸಿದ ನಿ.ಪಿ.- 2 ರಲ್ಲಿ ಮೃತ ರಾಮಪ್ಪನವರ ಶವ ಇದೆ. ಮೃತ ರಾಮಪ್ಪರವರ ಮೃತ ದೇಹವನ್ನು ಸಿ ಜೆ ಆಸ್ಪತ್ರೆ ಯಲ್ಲಿ ನೋಡಿದ್ದೇನೆ. ಮೃತ ರಾಮಪ್ಪ ರವರು ವಿಷ ಸೇವಿಸಿ ಮೃತಪಟ್ಟಿದ್ದಾರೆ ಅಂತ ವಿಷಯ ಗೊತ್ತಾಯಿತು. ಯಾವ ಕಾರಣಕ್ಕೆ ವಿಷ ಸೇವಿಸಿದ್ದಾನೆ ಅಂತ ನನಗೆ ಮಾಹಿತಿ ಇಲ್ಲ. ಈ ಬಗ್ಗೆ ಪೋಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ತನ್ನ ಹೇಳಿಕೆಗೆ ವ್ಯತಿರಿಕ್ತವಾಗಿ ಸಾಕ್ಷ್ಯವನ್ನು ಕೊಡುತ್ತಿರುವ ಕಾರಣ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮಾನ್ಯ ಸರ್ಕಾರಿ ಅಭಿಯೋಜಕರು ಕೋರಿರುತ್ತಾರೆ. ವಾದ ಕೇಳಿ ದಾಖಲೆ ಪರಿಶೀಲಿಸಿ ಅನುಮತಿ ಕೊಡಲಾಯಿತು.)

PW-14
CW-7

**ಪಾಟೀ ಸವಾಲುಃ ಮಾನ್ಯ ಸರ್ಕಾರಿ ಅಭಿಯೋಜಕರಿಂದ**:

2. ಸೈಟಿನ ವಿಚಾರವಾಗಿ ದೂರುದಾರರು ಮತ್ತು 2 ಆರೋಪಿತರಿಗೆ ಗಲಾಟೆ ಆಗಿ ಹೋಗಿ ಸಾಯಿ ಅಂತ ಹೇಳಿದ್ದರಿಂದ ಮೃತ ರಾಮಪ್ಪ ರವರು ವಿಷ ಸೇವಿಸಿ ಮೃತಪಟ್ಟಿರುತ್ತಾರೆ ಅಂತ ನಾನು ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ನನ್ನ ಹೇಳಿಕೆಯನ್ನು ನಿ.ಪಿ.- 14 ಎಂದು ಗುರುತಿಸಲಾಯಿತು. ನಿ.ಪಿ.- 14 ರಂತೆ ನಾನು ಹೇಳಿಕೆ ನೀಡಿದ್ದರೂ ಸಹ ಆರೋಪಿಗೆ ಸಹಾಯವಾಗಲೆಂದು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಶ್ರೀ .ಐ ಕೆ, ವಕೀಲರಿಂದ ಆರೋಪಿತರ ಪರವಾಗಿ**: ಏನೂ ಇಲ್ಲ.

**ಮರುವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓದಿ, ಹೇಳಿ, ಕೇಳಿ, ಸರಿ ಇದೆ.

(ವೇಲಾ .ಡಿ.ಕೆ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ದಾವಣಗೆರೆ.